**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/49/ರಾಗಾಸಾ/2018-19/ವಿ.ವೇ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 7.11.2018.

**ಸುತ್ತೋಲೆ**

ವಿಷಯ: ರಾಜೀವ್ ಗಾಂಧಿ ಸಾಲರೂಪದ ವಿದ್ಯಾರ್ಥಿವೇತನದ ಯೋಜನೆಯ ಬಗ್ಗೆ

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ:ಇಡಿ/128/ಮಾಹಿತಿ/2013,ದಿ:05-02-2014.

* * * *

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ ಆರ್ಥಿಕವಾಗಿ ಹಿಂದುಳಿದ ಕುಟುಂಬದಿಂದ ಬಂದ ಸರ್ಕಾರಿ/ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಮುಂದುವರೆಸುವ ಆಶಯಕ್ಕಾಗಿ 2013-14ನೇ ಸಾಲಿನಿಂದ ರಾಜ್ಯ ಸರ್ಕಾರವು ರಾಜೀವ್ ಗಾಂಧಿ ಸಾಲರೂಪದ ವಿದ್ಯಾರ್ಥಿವೇತನದ ಯೋಜನೆಯ ಸೌಲಭ್ಯವನ್ನು ಜಾರಿಗೆ ತಂದಿರುತ್ತದೆ.

2014-15ನೇ ಸಾಲಿನ ಪ್ರಾರಂಭದಲ್ಲಿ ಈ ಯೋಜನೆಗೆ ವಾರ್ಷಿಕ 3000 ವಿದ್ಯಾರ್ಥಿಗಳು ಈ ಯೋಜನೆ ಸೌಲಭ್ಯ ಪಡೆಯಲು ಗುರಿಯನ್ನು ಹೊಂದಲಾಗಿತ್ತು. ಆದರೆ 2014-15ನೇ ಸಾಲಿನಿಂದ 2017-18ನೇ ಸಾಲಿನ ಅಂತ್ಯದವರೆಗೆ ಮೂರು ವರ್ಷಗಳ ಅವಧಿಗೆ ಒಟ್ಟು 206 ವಿದ್ಯಾರ್ಥಿಗಳು ಮಾತ್ರ ರಾಜೀವ್ ಗಾಂಧಿ ಸಾಲರೂಪದ ವಿದ್ಯಾರ್ಥಿವೇತನದ ಯೋಜನೆಯ ಸೌಲಭ್ಯವನ್ನು ಪಡೆದಿದ್ದು, ಸರ್ಕಾರದ ನಿರೀಕ್ಷಿತ ಪ್ರಗತಿ ಕಂಡು ಬಂದಿರುವುದಿಲ್ಲ.

ಹಾಗಾಗಿ ಈ ಯೋಜನೆಯ ಬಗ್ಗೆ ಪ್ರಾಂಶುಪಾಲರುಗಳು ಶೈಕ್ಷಣಿಕ ಸಾಲಿನಲ್ಲಿ ಕಾಲೇಜಿಗೆ ಪ್ರವೇಶ ಪಡೆಯುವ ಸಂದರ್ಭದಲ್ಲಿ ಆರ್ಥಿಕವಾಗಿ ಹಿಂದುಳಿದ ಕುಟುಂಬದ ವಿದ್ಯಾರ್ಥಿಗಳ ಮಾಹಿತಿಯನ್ನು ಪಡೆದು ಈ ಯೋಜನೆಯ ಬಗ್ಗೆ ಅವರಲ್ಲಿ ಅರಿವು ಮೂಡಿಸುವುದು. ಕಾಲೇಜಿನ ಸೂಚನಾ ಫಲಕದಲ್ಲಿ ಈ ಯೋಜನೆಯ ಮಾಹಿತಿಯನ್ನು ಪ್ರಕಟಿಸುವುದು, ಕರಕಪತ್ರಗಳನ್ನು ಹಂಚುವ ಮೂಲಕ ಈ ಯೋಜನೆಯನ್ನು ಯಶಸ್ಸುಗೊಳಿಸುವುದು ಹಾಗೂ ಹೆಚ್ಚು ಹೆಚ್ಚು ವಿದ್ಯಾರ್ಥಿಗಳು ಈ ಯೋಜನೆಯ ಸೌಲಭ್ಯವನ್ನು ಪಡೆಯಲು ಮಾರ್ಗದರ್ಶನ ನೀಡುವುದು ಮತ್ತು ಸ್ಥಳೀಯ ರಾಷ್ಟ್ರೀಕೃತ ಬ್ಯಾಂಕುಗಳ ವ್ಯವಸ್ಥಾಪಕರೊಡಗೂಡಿ ಸಾಲಮೇಳದಂತಹ ಕಾರ್ಯಕ್ರಮಗಳನ್ನು ಆಯೋಜಿಸಿ ಈ ಯೋಜನೆಯನ್ನು ಯಶಸ್ಸುಗೊಳಿಸುವ ನಿಟ್ಟಿನಲ್ಲಿ ಕೈಜೋಡಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ಆಯುಕ್ತರು

**ಇವರಿಗೆ :**

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಬೆಂಗಳೂರು, ಧಾರವಾಡ, ಮಂಗಳೂರು, ಶಿವಮೊಗ್ಗ, ಮೈಸೂರು, ಕಲಬುರಗಿ - ಅಗತ್ಯ ಕ್ರಮಕ್ಕಾಗಿ ಹಾಗೂ ಈ ಯೋಜನೆಗೆ ಸಂಬಂಧಿಸಿದಂತೆ ಪ್ರಾಂಶುಪಾಲರುಗಳು ಕೈಗೊಂಡ ಕ್ರಮದ ಬಗ್ಗೆ ವರದಿಯನ್ನು ಕ್ರೋಢೀಕರಿಸಿ ಈ ಕಛೇರಿಗೆ ನೀಡುವುದು.
2. ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

**ಪ್ರತಿಯನ್ನು:**

1. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು - ಸದರಿ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸುವಂತೆ ಕೋರಲಾಗಿದೆ.
2. ಕಛೇರಿ ಪ್ರತಿ

D:\2017-18 Files\49 RGLS 2018-19.docx